# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ:09–08–2021 ರಂದು ಸಮಯ 12.00 ಗಂಟೆಗೆ ವಾರ್ಡ್ ಸಂಖ್ಯೆ: 155 ಹನುಮಂತನಗರಕ್ಕೆ ಸಂಬಂಧಪಟ್ಟಂತೆ ಹರಿಹರಗುಡ್ಡ ಉದ್ಯಾನವನ (ತಿಮ್ಮೇಶಪ್ರಭು ಉದ್ಯಾನವನ)ದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು**

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು ಹಾಗೂ ಅಧಿಕಾರಿಗಳು.**

1. ಶ್ರೀಮತಿ ಉಮಾದೇವಿ ಬಳಿಗಾರ್, ನೋಡಲ್ ಅಧಿಕಾರಿಗಳು – ಅಧ್ಯಕ್ಷರು
2. ಶ್ರೀ ಆನಂದ್.ಜಿ, ಸಹಾಯಕ ಅಭಿಯಂತರರು ವಾ.ನಂ.–155 – ಸದಸ್ಯ ಕಾರ್ಯದರ್ಶಿ
3. ಶ್ರೀ. ನಟರಾಜ್ (ಹಿ.ಆ.ಪ.) (ಹಿ.ಆ.ಪ.) – ಸದಸ್ಯರು
4. ಶ್ರೀ.ರಾಮಚಂದ್ರ (ಕಿ.ಅ–155) ಬೆಸ್ಕಾಂ
5. ಶ್ರೀಮತಿ.ಜ್ಯೋತಿ (ಟಿ.ಇ.)– ಸದಸ್ಯರು
6. ಕೃಷ್ಣಮೂರ್ತಿ–ಜಲ ಪರಿವೀಕ್ಷಕರು ಬಿಡಬ್ಲ್ಯೂಎಸ್‌ಎಸ್‌ಬಿ
7. ಶ್ರೀ ಪಿಳ್ಳಪ್ಪ – ಸಾರ್ವಜನಿಕರು.
8. ಶ್ರೀ ಉದಯ– ಸಾರ್ವಜನಿಕರು.
9. ಶ್ರೀ ಎಂ.ಚಂದ್ರಶೇಖರ್ – ಸಾರ್ವಜನಿಕರು.

****

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ನಂ 155ರ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರು ತಿಳಿಸಿರುವ ಮೇರೆಗೆ ನೆರೆದಿದ್ದ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರನ್ನು / ಅಧಿಕಾರಿಗಳನ್ನು ಮತ್ತು ಸ್ಥಳೀಯ ಸಾರ್ವಜನಿಕರಿಗೆ ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

**ಕಾಮಗಾರಿ ಇಲಾಖೆಗೆ ಸಂಬಂಧಪಟ್ಟ ವಿಷಯಗಳು.**

1) 4ನೇ ಅಡ್ಡರಸ್ತೆ ಹನುಮಂತನಗರದಲ್ಲಿ ಚರಂಡಿ ಅಭಿವೃದ್ಧಿ ಕಾಮಗಾರಿ ನಡೆಯುತ್ತಿರುವುದರಿಂದ ಚರಂಡಿಯ ಮಣ್ಣನ್ನು ರಸ್ತೆಯ ಹಾಕಿರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತುಂಬಾ ತೊದರೆಯಾಗುತ್ತಿದೆ ಎಂದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಕ್ರಮ: – ಕಾರ್ಯಪಾಲಕ ಅಭಿಯಂತರರು (ಆರ್.ಐ–ದಕ್ಷಿಣ) ರವರಿಗೆ ಕ್ರಮ ವಹಿಸಲು ಕೋರಲಾಗಿರುತ್ತದೆ.

2) ಹನುಮಂತನಗರದ ವ್ಯಾಪ್ತಿಯಲ್ಲಿ ಬರುವ ಮುಖ್ಯ ರಸ್ತೆಗಳಲ್ಲಿ ಪಾದಚಾರಿ ಮಾರ್ಗಗಳಲ್ಲಿ ಅತಿಕ್ರಮಿಸಿದ್ದಲ್ಲಿ ಸದರಿ ಪಾದಚಾರಿ ಮಾರ್ಗಗಳನ್ನು ತೆರವುಗೋಳಿಸಲು ಕ್ರಮಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಕ್ರಮ: – ಸಹಾಯಕ ಅಭಿಯಂತರರು/ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.

ಮು.ತಿ.ನೋ

ಬೀದಿ ದೀಪ ನಿರ್ವಹಣೆ ಕುರಿತು

1) ಜಿಂಕೆ ಪಾರ್ಕ್‌ನಲ್ಲಿ ವಿದ್ಯುತ್ ದೀಪ ಉರಿಯುತ್ತಿಲ್ಲವೆಂದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಸರಿಪಡಿಸಿಕೊಡುವಂತೆ ಕೋರಿದರು.

ಕ್ರಮ: – ಸಹಾಯಕ ಕಾರ್ಯಪಾಲಕ ಅಭಿಯಂತರರು ವಿದ್ಯುತ್ (ದಕ್ಷಿಣ) ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.

ತೋಟಗಾರಿಕೆ ಇಲಾಖೆ:

1) ಹನುಮಂತನಗರ ವಾರ್ಡ್‌ನಲ್ಲಿ ಬರುವ ಜಿಂಕೆ ಪಾರ್ಕ್‌ನಲ್ಲಿ ಇರುವ ಹಳೆ ಮರಗಳನ್ನು ತೆರವುಗೊಳಿಸಲು ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಕ್ರಮ: – ತೋಟಗಾರಿಕೆ ಅಧೀಕ್ಷಕರು(ದ) ಕ್ರಮ ವಹಿಸಲು ಕೋರಲಾಗಿರುತ್ತದೆ.

BWSSB ಇಲಾಖೆ:

1) ಜಿಂಕೆ ಪಾರ್ಕ್ ಉದ್ಯಾನವನದ ಗ್ಯಾಲರಿ ಒಳಗಡೆ ಒಳಚರಂಡಿ ನೀರು ಬರುತ್ತಿರುವುದನ್ನು ತಡೆಯಲು ಹಾಗೂ ಜವರೇಗೌಡ ರಸ್ತೆಯಲ್ಲಿ ಒಳಚರಂಡಿ ಪೈಪ್‌ಲೈನ್ ಅಳವಡಿಸಿಕೊಡಲು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಕ್ರಮ: – ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಎಂ.ಎನ್.ಕೆ ಪಾರ್ಕ್ ಉಪವಿಭಾಗ, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಕ್ರಮಕೈಗೊಳ್ಳಲು ಕೋರಲಾಗಿರುತ್ತದೆ.

ವಾರ್ಡ್ ಕಮಿಟಿ ಸಭೆಯಲ್ಲಿ ಉಪಸ್ಥಿತರಿರುವ ಅಧಿಕಾರಿ ವರ್ಗದವರಿಗೆ, ವಾರ್ಡ್ ಕಮಿಟಿ ಸದಸ್ಯರುಗಳಿಗೆ ಹಾಗೂ ಸಾರ್ವಜನಿಕರಿಗೆ ಪ್ರತಿ ತಿಂಗಳ ಮೊದಲನೆಯ ಮತ್ತು ಮೂರನೇ ಶನಿವಾರದಂದು ವಾರ್ಡ್ ಕಮಿಟಿ ಸಭೆಯನ್ನು ಏರ್ಪಡಿಸಲಾಗುವುದು ಎಂದು ತಿಳಿಸುತ್ತಾ, ವಂದನಾರ್ಪಣೆ ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

9/8/21 9/8/21

ಕಾರ್ಯದರ್ಶಿ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ–155 ಹನುಮಂತನಗರ

ಅಧ್ಯಕ್ಷರು ವಾರ್ಡ್ ಸಮಿತಿ
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ–155 ಹನುಮಂತನಗರ

ಪ್ರತಿಯನ್ನು,

1. ಮಾನ್ಯ ಮುಖ್ಯ ಆಯುಕ್ತರು, ಬೃಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಹಣಕಾಸು) ಮತ್ತು ವಲಯ ಆಯುಕ್ತರು(ದ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು (ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
6. ಮಾನ್ಯ ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ,
7. ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) /ಸ.ಕಾ.ನಿ.ಅ (ಬ.ಗು) ಉಪವಿಭಾಗ ರವರ ಅವಗಾಹನೆಗೆ.
8. ಆರೋಗ್ಯ ವೈದ್ಯಾಧಿಕಾರಿಗಳು, ಬಸವನಗುಡಿ ವಿಭಾಗ ರವರ ಅವಗಾಹನೆಗೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ಹನುಮಂತನಗರ ರವರ ಅವಗಾಹನೆಗೆ.
10. ಪೋಲೀಸ್ ಇನ್ಸ್‌ಪೆಕ್ಟರ್, ಕಾನೂನು ಸುವ್ಯವಸ್ಥೆ ಹನುಮಂತನಗರ/ಕೆಂಪೇಗೌಡನಗರ ಪೋಲೀಸ್ ಠಾಣೆ ರವರ ಅವಗಾಹನೆಗೆ.
11. ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಸಂಚಾರಿ ಪೋಲೀಸ್ ಠಾಣೆ ರವರ ಅವಗಾಹನೆಗೆ.
12. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ., ಎಂ.ಎನ್.ಕೆ ಪಾರ್ಕ್, ಬಸವನಗುಡಿ ರವರ ಅವಗಾಹನೆಗೆ.
13. ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
14. ಕಛೇರಿ ಕಡತಕ್ಕೆ.